<u>ಸಾಕ್ಷಿ ಗೆ ದಿನಾಂಕ: 08-01-2026 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.</u>

<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದ</u>

ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ, ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ.

1. ಎದುರುದಾರ ಕಚೇರಿಗೆ ನೀಡಿದ ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2. ಅಲಭ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.
3. ವಂಶಾವಳಿ ಪ್ರಮಾಣ ಪತ್ರದ ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.
4. ನನ್ನ ಆಧಾರ್ ಕಾರ್ಡ್‌ನ ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.
5. ಎರಡು ಪತ್ರಿಕೆಗಳಲ್ಲಿ ಪ್ರಕಟವಾದ ನೋಟೀಸನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು:</u>

ಎದುರುದಾರರು ಏಕಪಕ್ಷೀಯರಾಗಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ: ಇಲ್ಲ

{ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು}

ಓ. ಹೆ. ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು, ಚಿತ್ತಾಪೂರ.